# <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** ಆಸಿಡ್ ದಾಳಿಗೊಳಗಾದ ಮಹಿಳೆ /ಹೆಣ್ಣು ಮಕ್ಕಳಿಗೆ ರೂ.3000 ಗಳ ಮಾಸಿಕ ಪಿಂಚಣಿ ನೀಡುವ ಕುರಿತು.

**ಓದಲಾಗಿದೆ**

1. ಸರ್ಕಾರದ ಆದೇಶ ಸಂಖ್ಯೆ: ಮಮಇ 268 ಮಮಅ 2006, ದಿನಾಂಕ: 27/11/2007.
2. ಸರ್ಕಾರದ ಆದೇಶ ಸಂಖ್ಯೆ: ಮಮಇ 29 ರಾಮಆ 2013, ದಿನಾಂಕ:20.03.2015.
3. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಸ್ತಾವನೆ: ಮಮಇ 29 ರಾಮಅ 2015 ದಿ: 24/08/2015.

<u>ಪ್ರಸ್ತಾವನೆ:</u>

ಮೇಲೆ ಓದಲಾದ ಆದೇಶ (1) ರನ್ವಯ ರಾಜ್ಯ ಸರ್ಕಾರವು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಸಿಡ್ ದಾಳಿಗೆ ಒಳಗಾದ ಮಹಿಳೆ ಮತ್ತು ಹೆಣ್ಣು ಮಕ್ಕಳಿಗೆ ಪರಿಹಾರ ಹಾಗೂ ಪುನರ್ವಸತಿ ಕಲ್ಪಿಸುವ ಸುರಕ್ಷಾ ಯೋಜನೆಯಡಿ 2003–04 ಸಾಲಿನಿಂದ ಆಸಿಡ್ ದಾಳಿಗೊಳಗಾದ ಮಹಿಳೆ/ಹೆಣ್ಣು ಮಕ್ಕಳಿಗೆ ರೂ.2.00 ಲಕ್ಷಗಳ ಪರಿಹಾರ ಧನವನ್ನು ನೀಡಲಾಗುತ್ತಿದ್ದು, ಉಲ್ಲೇಖ(2) ಆದೇಶದನ್ವಯ ಸದರಿ ಪರಿಹಾರ ಧನವನ್ನು ರೂ.3.00 ಲಕ್ಷಗಳಿಗೆ ಹೆಚ್ಚಿಸಲಾಗಿರುತ್ತದೆ.

ಮುಂದುವರೆದಂತೆ, ಆಸಿಡ್ ದಾಳಿಗೊಳಗಾದ ಮಹಿಳೆ /ಹೆಣ್ಣು ಮಕ್ಕಳು, ಶೇಕಡಾ 40 ಮತ್ತು ಅದಕ್ಕಿಂತ ಹೆಚ್ಚಿನ ಅಂಗವಿಕಲತೆಗೆ ಒಳಗಾಗಿದಲ್ಲಿ ಹಾಗೂ ನಗರ ಪ್ರದೇಶದಲ್ಲಿ ರೂ 17,000/– ಹಾಗೂ ಗ್ರಾಮೀಣ ಪ್ರದೇಶದಲ್ಲಿ ರೂ. 12,000/–ಗಳ ಆದಾಯ ಮಿತಿಗೆ ಒಳಪಟ್ಟಿದ್ದಲ್ಲಿ,ಕಂದಾಯ ಇಲಾಖೆಯಡಿ ಜಾರಿಯಲ್ಲಿರುವ ಅಂಗವಿಕಲ ವೇತನ ಯೋಜನೆಯಡಿ ಪಿಂಚಣಿ ಪಡೆಯಬಹುದಾಗಿದೆ. ಆದರೆ ಆಸಿಡ್ ದಾಳಿಗೊಳಗಾದ ಮಹಿಳೆಯರು ಸಮಾಜದ ವಿವಿಧ ಸ್ತರಗಳಲ್ಲಿ ಇರಬಹುದಾದರಿಂದ ಆಸಿಡ್ ದಾಳಿಗೆ ಒಳಗಾದ ಎಲ್ಲಾ ಮಹಿಳೆಯರಿಗೆ ಜೀವನ ನಿರ್ವಹಣೆಗೆ ಅನುಕೂಲ ಮಾಡಿಕೊಡುವ ಹಾಗೂ ಸಮಾಜದಲ್ಲಿ ಗೌರವಪೂರ್ವಕವಾಗಿ ಬದುಕಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಈಗಾಗಲೇ ಗುರುತಿಸಿರುವ ಆಸಿಡ್ ದಾಳಿಗೊಳಗಾದ ಮಹಿಳೆಯರಿಗೆ ರೂ. 3000.00 ಗಳ ಮಾಸಿಕ ಸಹಾಯ ಧನ ನೀಡಲು ಸರ್ಕಾರವು ತೀರ್ಮಾನಿಸಿರುವ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಆದೇಶ ಹೊರಡಿಸಲಾಗಿದೆ.

## <u>ಸರ್ಕಾರದ ಆದೇಶ ಸಂಖ್ಯೆ: ಆರ್‌ಡಿ 149 ಡಿಎಸ್‌ಪಿ 2015,ದಿನಾಂಕ:19.09.2015</u>

ರಾಜ್ಯದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಅಸಿಡ್ ದಾಳಿಗೆ ಒಳಗಾದ ಮಹಿಳೆ ಮತ್ತು ಹೆಣ್ಣು ಮಕ್ಕಳಿಗೆ ಪರಿಹಾರ ಹಾಗೂ ಪುನರ್ವಸತಿ ಕಲ್ಪಿಸುವ ಸುರಕ್ಷಾ ಯೋಜನೆಯಡಿ ಈಗಾಗಲೇ ಗುರುತಿಸಿರುವ ಆಸಿಡ್ ದಾಳಿಗೊಳಗಾದ ಮಹಿಳೆ/ಹೆಣ್ಣು

ಮಕ್ಕಳಿಗೆ ಆರ್ಥಿಕ ಭದ್ರತೆಯನ್ನೊದಗಿಸಿ ಸಮಾಜದಲ್ಲಿ ಗೌರವಪೂರ್ವಕವಾಗಿ ಬದುಕಲು ಅವಕಾಶ ಕಲ್ಪಿಸುವ ದೃಷ್ಟಿಯಿಂದ ರೂ. 3000.00/-(ಮೂರು ಸಾವಿರ ರೂಗಳು ಮಾತ್ರ)ಗಳ ಮಾಸಿಕ ಸಹಾಯಧನ ನೀಡಲು ಆದೇಶಿಸಿದೆ.

ಈ ಯೋಜನೆಯಡಿ ಸೌಲಭ್ಯ ಪಡೆಯಲು ಆದಾಯ ಮಿತಿ ಮತ್ತು ವಯೋಮಿತಿಯನ್ನು ನಿಗಧಿಪಡಿಸಿರುವುದಿಲ್ಲ

1. ಉದ್ದೇಶಿತ ಫಲಾನುಭವಿಯು ಈಗಾಗಲೇ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ, ಅಸಿಡ್ ದಾಳಿಗೆ ಒಳಗಾದ ಮಹಿಳೆ ಮತ್ತು ಹೆಣ್ಣು ಮಕ್ಕಳಿಗೆ ಪರಿಹಾರ ಹಾಗೂ ಪುರ್ನವಸತಿ ಕಲ್ಪಿಸುವ ಸುರಕ್ಷಾ ಯೋಜನೆಯಡಿ ಪರಿಹಾರ ಪಡೆದಿರಬೇಕು.
2. ಇತರೆ ಯಾವುದೇ ಸಾಮಾಜಿಕ ಭದ್ರತಾ ಯೋಜನೆಗಳಡಿ ಸೌಲಭ್ಯ ಪಡೆಯುತ್ತಿರಬಾರದು.
3. ಈ ಮಾಸಿಕ ಸಹಾಯ ಧನವನ್ನು ಅರ್ಜಿದಾರರ ವಾಸ ಸ್ಥಳ ವ್ಯಾಪ್ತಿಗೆ ಬರುವ ತಹಸೀಲ್ದಾರರು ಮಂಜೂರು ಮಾಡತಕ್ಕದ್ದು.
4. ಈ ಮಾಸಿಕ ಸಹಾಯಧನವನ್ನು ಫಲಾನುಭವಿಯ ಬ್ಯಾಂಕ್ ಖಾತೆಗೆ ಖಜಾನೆಯಿಂದ ಪ್ರತಿ ತಿಂಗಳು ವರ್ಗಾಯಿಸತಕ್ಕದ್ದು.
5. ಫಲಾನುಭವಿಯು ಮರಣ ಹೊಂದಿದ ಪಕ್ಷದಲ್ಲಿ ಮಾಸಿಕ ಸಹಾಯಧನವನ್ನು ರದ್ದುಪಡಿಸಲಾಗುವುದು.
6. ಈ ಯೋಜನೆಯಡಿ ತಗಲುವ ವೆಚ್ಚವನ್ನು 2015-16 ನೇ ಸಾಲಿನಲ್ಲಿ ಅಂಗವಿಕಲ ವೇತನ ಯೋಜನೆಯ ಲೆಕ್ಕ ಶೀರ್ಷಿಕೆಯಡಿ **"2235-02-101-0-20-V"**ರಡಿ ಭರಿಸತಕ್ಕದ್ದು.

ಈ ಆದೇಶವನ್ನು ದಿನಾಂಕ:19-09-2015ರಂದು ಆರ್ಥಿಕ ಇಲಾಖೆಯು ಕಡತ ಸಂ.ಆರ್‌ಡಿ 149 ಡಿಎಸ್‌ಪಿ 2015ರಲ್ಲಿ ನೀಡಿರುವ ಸಹಮತಿಯಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಎಸ್.ಕಾತ್ಯಾಯಿನಿ ದೇವಿ), 19/9/15
ಪೀಠಾಧಿಕಾರಿ
ಸಾಮಾಜಿಕ ಭದ್ರತೆ ಮತ್ತು
ಪಿಂಚಣಿಗಳ ನಿರ್ದೇಶನಾಲಯ,ಬೆಂಗಳೂರು